**ಕರ್ನಾಟಕ ಸರ್ಕಾರ**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯ, ತರೀಕೆರೆ.**

**ಸಿ.ಸಿ.ನಂ. 1300/2021**

ಪಿ.ಡಬ್ಲ್ಯೂ: 2

ಸಿ.ಡಬ್ಲ್ಯೂ: 4

| | | |
|---|---|---|
| ಸಾಕ್ಷಿದಾರರ ಹೆಸರು | : | ಸುರೇಶ್ |
| ತಂದೆಯ ಹೆಸರು: | : | ಪಳನಿಸ್ವಾಮಿ |
| ವಯಸ್ಸು | : | **32 ವರ್ಷ** |
| ಉದ್ಯೋಗ | : | ಚಾಲಕ |
| ವಾಸಸ್ಥಳ | : | ಲಕ್ಕವಳ್ಳಿ |

**ದಿನಾಂಕ: 09-09-2025 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು**

**ಮುಖ್ಯ ವಿಚಾರಣೆ :** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ಈಗ್ಗೆ ಸುಮಾರು 7-8 ವರ್ಷಗಳ ಹಿಂದೆ ನಾನು ಲಕ್ಕವಳ್ಳಿ ಗ್ರಾಮದಲ್ಲಿ ಸಂಜೆ 4-00 ಗಂಟೆ ಸಮಯದಲ್ಲಿ ಪೊಲೀಸರ ಕೋರಿಕೆಯ ಮೇರೆಗೆ ಒಂದು ದಾಖಲಾತಿಗೆ ಸಹಿ ಮಾಡಿದ್ದು, ಸದರಿ ದಾಖಲೆಯಲ್ಲಿ ಬರೆದಿರುವ ವಿಚಾರಗಳು ನನಗೆ ಗೊತ್ತಿರುವುದಿಲ್ಲ. ನನ್ನ ಸಮಕ್ಷಮದಲ್ಲಿ ಪೊಲೀಸರು ಯಾವುದೇ ವಸ್ತುಗಳನ್ನು ಅಮಾನತ್ತುಪಡಿಸಿಕೊಂಡಿರುವುದಿಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿದ್ದು, ಅದು ಸ್ಥಳ ಮಹಜರ್ ಆಗಿದ್ದು, ಸದರಿ ದಾಖಲೆಯನ್ನು ಈಗಾಗಲೇ ನಿಪಿ-2 ಎಂದು ಗುರುತಿಸಲಾಗಿದ್ದು, ಸಾಕ್ಷಿಯ ಸಹಿಯನ್ನು ನಿಪಿ-2(ಬಿ) ಎಂದು ಗುರುತಿಸಲಾಯಿತು.

ಸಾಕ್ಷಿಯು ನಿಪಿ-3 ಮತ್ತು 4 ರಲ್ಲಿ ತಮ್ಮ ಇರುವಿಕೆಯನ್ನು ನೋಡಿ ಗುರುತಿಸಿರುತ್ತಾರೆ.

**(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.)**

**ಪಾಟೀ ಸವಾಲು:** ಸಹಾಯಕ ಸರ್ಕಾರಿ ಅಭಿಯೋಜಕರವರಿಂದ

ದಿನಾಂಕ: **21-03-2020** ರಂದು ರಾತ್ರಿ **7-00** ಗಂಟೆ ಸಮಯದಲ್ಲಿ ಕರಕುಚ್ಚಿ ತಾಂಡ್ಯದ **2** ನೇ ಆರೋಪಿಯ ಅಂಗಡಿಯ ಮುಂದೆ ಪೊಲೀಸರು ಮಹಜರ್ ಕ್ರಮವನ್ನು ಜರುಗಿಸಿದ್ದು, ಅದಕ್ಕೆ ನನ್ನ ಸಹಿ ಹಾಕಿರುತ್ತೇನೆಂದರೆ ಸರಿ. **1** ನೇ ಆರೋಪಿಯು ಅಕ್ರಮವಾಗಿ ಮದ್ಯವನ್ನು ಮಾರಾಟ ಮಾಡುತ್ತಿದ್ದು, ಸದರಿ ಮದ್ಯವನ್ನು ಅವರಿಂದ ಅಮಾನತ್ತುಪಡಿಸಿಕೊಂಡ ಬಗ್ಗೆ ನಾನು ನಿಪಿ-**2** ಕ್ಕೆ ಸಹಿ ಹಾಕಿರುತ್ತೇನೆಂದರೆ ಸರಿಯಲ್ಲ. ಪೊಲೀಸರು ನನ್ನ ಸಮಕ್ಷಮ

ಆರೋಪಿಯ ಕಡೆಯಿಂದ 330 ಎಂ ಎಲ್ ನ ಯು ಬಿ ಎಕ್ಸ್‌ಪೋರ್ಟ್ ಪ್ರಿಮಿಯಮ್ ನ 10 ಬೀಯರ್ ಬಾಟಲುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಅದೇ ರೀತಿ 90 ಎಂ ಎಲ್ ನ ಕ್ಯಾಪ್ಟನ್ ಮಾರ್ಟಿನ್ ಸ್ಪೆಷಲ್ ವಿಸ್ಕಿಯ 37 ಪೌಚುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಪೊಲೀಸರು ನನ್ನ ಸಮಕ್ಷಮ ಆರೋಪಿಯಿಂದ ಮದ್ಯದ ಪೌಚುಗಳನ್ನು ಅಮಾನತ್ತುಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ.

ಆರೋಪಿತರು ನನಗೆ ಪರಿಚಯವಿರುವ ಕಾರಣ, ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ನಿಪಿ-2 ರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ನನಗೆ ಗೊತ್ತಿದ್ದರೂ ಸಹ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

ನಾನು ಈ ಪ್ರಕರಣದ ಘಟನೆಯನ್ನು ಕಣ್ಣಾರೆ ಕಂಡಿದ್ದೇನೆಂದರೆ ಸರಿಯಲ್ಲ. ನಾನು ಈಗ ಓದಿ ಹೇಳಿದಂತೆ ನಾನು ಮೇಲ್ಕಂಡ ವಿಳಾಸದಲ್ಲಿ – - - -ಪುನಃ ನೋಡಿದರೆ ಗುರುತಿಸುತ್ತೇನೆ ಎಂದು ಹೇಳಿದ್ದೇನೆಂದರೆ ಸರಿಯಲ್ಲ. ಸಾಕ್ಷಿಯ ಅಲ್ಲಗಳೆದ ಹೇಳಿಕೆಯ ಭಾಗವನ್ನು ನಿಪಿ-7 ಎಂದು ಗುರುತಿಸಲಾಯಿತು. ನಾನು ಈ ಪ್ರಕರಣದ ಘಟನೆಯನ್ನು ಕಣ್ಣಾರೆ ಕಂಡಿದ್ದರೂ ಸಹ ಆರೋಪಿತರಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆಂದರೆ ಸರಿಯಲ್ಲ.

**<u>ಪಾಟೀ ಸವಾಲು : ಆರೋಪಿ ಪರ ವಕೀಲರಿಂದ.</u>**

ಪಾಟೀ ಸವಾಲು ಇಲ್ಲ

**<u>ಮರುವಿಚಾರಣೆ</u>:** ಇರುವುದಿಲ್ಲ.

**(ತೆರೆದ ನ್ಯಾಯಾಲಯದಲ್ಲಿ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು.)**

**ಓ. ಕೇ. ಸ. ಇ. ಎ. ಒ.**

ಸಹಿ/-

ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು

**ಪ್ರ.ದ.ನ್ಯಾ.ದಂ.ರವರು,ತರೀಕೆರೆ.**